ಸೋಮವಾರ 27.04.2026 ಬೆಂಗಳೂರು ಬೆಲೆ: 5ರೂ 2 ಪುಟಗಳು ಸಂಪುಟ 01 ಸಂಚಿಕೆ 176 Monday Bangalore Price: 5/- Rs 2 Pages Volume 01 Issue 176

PRGI/RNI: KNKAN/25/A1348

ಕನ್ನಡ ದಿನಪತ್ರಿಕೆ

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

DIGITAL VARTHE

digitalvarthe@gmail.com
www.digitalvarthe.com
epaper.digitalvarthe.com
Mob: 9538786812
Office: 9480847498

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಾರಥ್ಯದಲ್ಲಿ

## ಎಡಗೈ : 5.25%, ಬಲಗೈ: 5.25 % ಹಾಗೂ ಇತರೆ ಸಮುದಾಯಗಳಿಗೆ 4.5% ಮೀಸಲಾತಿ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು:** ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಪ್ರಶ್ನೆಯಲ್ಲಿ ದಶಕಗಳ ಕಾಲ ನಡೆಯುತ್ತಿದ್ದ ಚರ್ಚೆಗಳು, ಹೋರಾಟಗಳು ಮತ್ತು ರಾಜಕೀಯ ಒತ್ತಡಗಳಿಗೆ ತಾರ್ಕಿಕ ಅಂತ್ಯ ನೀಡುವ ನಿಟ್ಟಿನಲ್ಲಿ, ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯ ಸರ್ಕಾರವು ಐತಿಹಾಸಿಕ ಹಾಗೂ ದಿಟ್ಟ ನಿರ್ಧಾರ ಕೈಗೊಂಡಿದೆ. ಪರಿಶಿಷ್ಟ ಜಾತಿಯ ವಿವಿಧ ಉಪಸಮುದಾಯಗಳ ನಡುವೆ ಸಮಾನ ಅವಕಾಶ, ಸಮಾನ ಪ್ರತಿನಿಧಿತ್ವ ಮತ್ತು ಸಾಮಾಜಿಕ ನ್ಯಾಯವನ್ನು ಖಚಿತಪಡಿಸುವ ಉದ್ದೇಶದಿಂದ, ಎಡಗೈ, ಬಲಗೈ ಹಾಗೂ ಇತರ ಅಲೆಮಾರಿ ಸಮುದಾಯಗಳಿಗೆ ಕ್ರಮವಾಗಿ 5.25:5.25:4.5ರ ಅನುಪಾತದಲ್ಲಿ ಒಳಮೀಸಲಾತಿ ಕಲ್ಪಿಸಲು ಸಚಿವ ಸಂಪುಟವು ಸರ್ವಾನುಮತದಿಂದ ಒಪ್ಪಿಗೆ ನೀಡಿದೆ. ಈ ನಿರ್ಧಾರವು ಕೇವಲ ಅಂಕಿ-ಅಂಶಗಳ ಹಂಚಿಕೆ ಮಾತ್ರವಲ್ಲ, ಸಾಮಾಜಿಕ ಸಮತೋಲನ ಸಾಧಿಸುವ ಪ್ರಮುಖ ಹೆಜ್ಜೆಯಾಗಿ ಪರಿಗಣಿಸಲಾಗುತ್ತಿದೆ.

ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಈ ನಿರ್ಧಾರವು ರಾಜ್ಯದ ದಲಿತ ಸಮುದಾಯಗಳ ದೀರ್ಘಕಾಲದ ಹೋರಾಟಕ್ಕೆ ಪ್ರತಿಫಲವಾಗಿದೆ ಎಂದು ಹೇಳಿದರು. ಹಲವು ವರ್ಷಗಳಿಂದ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವಿಚಾರದಲ್ಲಿ ಅಸಮಾಧಾನ ವ್ಯಕ್ತವಾಗುತ್ತಿದ್ದು, ಕೆಲವು ಉಪಸಮುದಾಯಗಳು ತಮ್ಮ ಪಾಲಿನ ಅವಕಾಶಗಳು ಕಡಿಮೆಯಾಗುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸುತ್ತಿದ್ದವು. ಈ ಅಸಮತೋಲನವನ್ನು ಸರಿಪಡಿಸಲು ಸರ್ಕಾರವು ವೈಜ್ಞಾನಿಕ, ಕಾನೂನುಬದ್ಧ ಮತ್ತು ಸಾಮಾಜಿಕ ಆಧಾರದ ಮೇಲೆ ಸೂಕ್ತ ಮಾದರಿಯನ್ನು ರೂಪಿಸಿದೆ ಎಂದು ಅವರು ವಿವರಿಸಿದರು.

ನ್ಯಾಯಾಲಯದ ಮಾರ್ಗಸೂಚಿಗಳನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂಬುದನ್ನು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು. ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್ ತೀರ್ಪುಗಳ ಪ್ರಕಾರ ಒಟ್ಟು ಮೀಸಲಾತಿ ಪ್ರಮಾಣವು ಶೇ.50 ಮೀರಬಾರದು ಎಂಬ ನಿರ್ಬಂಧ ಇರುವುದರಿಂದ, ಸರ್ಕಾರವು ತನ್ನ ಹಿಂದಿನ 56% ಮೀಸಲಾತಿ ಮಾದರಿಯನ್ನು ತಾತ್ಕಾಲಿಕವಾಗಿ ಪರಿಷ್ಕರಿಸಿದೆ. ಇದರಂತೆ ಪರಿಶಿಷ್ಟ ಜಾತಿಗಳಿಗೆ 15% ಹಾಗೂ ಪರಿಶಿಷ್ಟ ಪಂಗಡಗಳಿಗೆ 3% ಮೀಸಲಾತಿ ನಿಗದಿಪಡಿಸಲಾಗಿದೆ. ಈ 15% ಒಳಗೆ ಎಡಗೈ ಸಮುದಾಯಗಳಿಗೆ 5.25%, ಬಲಗೈ ಸಮುದಾಯಗಳಿಗೆ 5.25% ಮತ್ತು ಬೋವಿ, ಲಂಬಾಣಿ, ಕೊರಚ, ಕೊರಮ ಸೇರಿದಂತೆ 59 ಅಲೆಮಾರಿ ಜಾತಿಗಳಿಗೆ 4.5% ಮೀಸಲಾತಿ ನೀಡಲಾಗಿದೆ.

ಮುಖ್ಯಮಂತ್ರಿಗಳ ಪ್ರಕಾರ, ಈ ಹಂಚಿಕೆ ಹಿಂದಿನ 6:6:5 ಮಾದರಿಯ ಪರಿಷ್ಕೃತ ರೂಪವಾಗಿದೆ. ಮೊದಲು ಪರಿಶಿಷ್ಟ ಜಾತಿಗಳ 17% ಮೀಸಲಾತಿಯಲ್ಲಿ 6:6:5 ಅನುಪಾತವನ್ನು ಅನ್ವಯಿಸಲಾಗಿತ್ತು. ಆದರೆ ಒಟ್ಟು ಪ್ರಮಾಣವನ್ನು 15%ಕ್ಕೆ ಇಳಿಸಬೇಕಾದ ಪರಿಸ್ಥಿತಿ ಬಂದ ಹಿನ್ನೆಲೆ, ಅದರ ಅನುಪಾತವನ್ನು ಮರುಗಣನೆ ಮಾಡಿ 5.3:5.3:4.4 ರೂಪದಲ್ಲಿ ಶಿಫಾರಸು ಮಾಡಲಾಗಿತ್ತು. ಅಂತಿಮವಾಗಿ ಕಾರ್ಯೋಚಿತ ಮತ್ತು ಸಮತೋಲನದ ದೃಷ್ಟಿಯಿಂದ 5.25:5.25:4.5 ಅನುಪಾತವನ್ನು ಸಚಿವ ಸಂಪುಟ ಅಂತಿಮಗೊಳಿಸಿದೆ.

ಈ ನಿರ್ಧಾರವು ಎಲ್ಲಾ ಉಪಸಮುದಾಯಗಳಿಗೆ ನ್ಯಾಯ ಒದಗಿಸುವುದರ ಜೊತೆಗೆ, ಅವಕಾಶಗಳ ಸಮನ್ವಯವನ್ನು ಖಚಿತಪಡಿಸುತ್ತದೆ ಎಂದು ಮುಖ್ಯಮಂತ್ರಿ ವಿಶ್ವಾಸ ವ್ಯಕ್ತಪಡಿಸಿದರು. ಸರ್ಕಾರಿ ನೇಮಕಾತಿ, ಶಿಕ್ಷಣ ಹಾಗೂ ಇತರ ಕಲ್ಯಾಣ ಯೋಜನೆಗಳಲ್ಲಿ ಈ ಒಳಮೀಸಲಾತಿ ಮಾದರಿಯನ್ನು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತದೆ ಎಂದು ಅವರು ಹೇಳಿದರು. ಜೊತೆಗೆ, ಶೇ.6ರಷ್ಟು ಮೀಸಲಾತಿಗೆ ಸಂಬಂಧಿಸಿದ ವಿಷಯವನ್ನು ನ್ಯಾಯಾಲಯ ಅಂತಿಮವಾಗಿ ನಿರ್ಧರಿಸುವವರೆಗೆ 'ಬ್ಯಾಕ್‌ಲಾಗ್' ಎಂದು ಪರಿಗಣಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಒಳಮೀಸಲಾತಿ ವಿಚಾರವು ಕೇವಲ ಆಡಳಿತಾತ್ಮಕ ನಿರ್ಧಾರವಲ್ಲ, ಇದು ಸಾಮಾಜಿಕ ನ್ಯಾಯದ ತತ್ವವನ್ನು ಅನುಷ್ಠಾನಗೊಳಿಸುವ ಪ್ರಕ್ರಿಯೆಯಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು. ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳೊಳಗಿನ ಅಸಮಾನತೆಗಳನ್ನು ನಿವಾರಿಸಿ, ನಿಜವಾದ ಸಮಾನತೆಯನ್ನು ಸಾಧಿಸುವುದೇ ಸರ್ಕಾರದ ಉದ್ದೇಶ ಎಂದು ಅವರು ತಿಳಿಸಿದರು. ಈ ನಿರ್ಧಾರವು ದೇಶದ ಮಟ್ಟದಲ್ಲಿಯೇ ಮಾದರಿಯಾಗುವ ಸಾಧ್ಯತೆ ಇದೆ ಎಂದು ಸಹ ಅಭಿಪ್ರಾಯಪಟ್ಟರು.

ಈ ವಿಷಯದ ಹಿನ್ನೆಲೆಯನ್ನು ವಿವರಿಸಿದ ಮುಖ್ಯಮಂತ್ರಿ, ಪರಿಶಿಷ್ಟ ಜಾತಿಗಳೊಳಗಿನ ಒಳಮೀಸಲಾತಿಗಾಗಿ ಹಲವು ವರ್ಷಗಳಿಂದ ವಿವಿಧ ಸಂಘಟನೆಗಳು ಹೋರಾಟ ನಡೆಸಿದ್ದನ್ನು ಸ್ಮರಿಸಿದರು. ಚಿತ್ರದುರ್ಗದಲ್ಲಿ ನಡೆದ ಪರಿಶಿಷ್ಟ ಜಾತಿ ಸಮಾವೇಶದಲ್ಲಿ 101 ಪರಿಶಿಷ್ಟ ಜಾತಿಗಳು ಹಾಗೂ 59 ಅಲೆಮಾರಿ ಜಾತಿಗಳ ಪ್ರತಿನಿಧಿಗಳು ಭಾಗವಹಿಸಿ, ಒಳಮೀಸಲಾತಿಗೆ ಸರ್ವಾನುಮತದಿಂದ ಒಪ್ಪಿಗೆ ಸೂಚಿಸಿದ್ದನ್ನು ಅವರು ಉಲ್ಲೇಖಿಸಿದರು. ಈ ಸಮಾವೇಶವು ಸರ್ಕಾರಕ್ಕೆ ಸ್ಪಷ್ಟ ದಿಕ್ಕು ನೀಡಿದ್ದು, ಬಳಿಕ ಗೃಹ ಸಚಿವ ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಪ್ರಣಾಳಿಕಾ ಸಮಿತಿಯಲ್ಲಿಯೂ ಈ ಬಗ್ಗೆ ಭರವಸೆ ನೀಡಲಾಗಿತ್ತು.

ಸುಪ್ರೀಂ ಕೋರ್ಟ್ ರಾಜ್ಯಗಳಿಗೆ ಒಳಮೀಸಲಾತಿ ಕುರಿತು ನಿರ್ಧಾರ ಕೈಗೊಳ್ಳುವ ಅಧಿಕಾರ ನೀಡಿದ ಹಿನ್ನೆಲೆಯಲ್ಲಿ, ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ಅವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ಆಯೋಗ ರಚಿಸಲಾಯಿತು. ಈ ಆಯೋಗವು ಸಮಗ್ರ ಅಧ್ಯಯನ ನಡೆಸಿ ವರದಿ ಸಲ್ಲಿಸಿದ್ದು, ಅದರ ಆಧಾರದ ಮೇಲೆ ಸರ್ಕಾರವು ಮೊದಲ ಹಂತದಲ್ಲಿ 6:6:5 ಮಾದರಿಯನ್ನು ರೂಪಿಸಿತ್ತು. ಆಗ ಪರಿಶಿಷ್ಟ ಜಾತಿಗಳಿಗೆ 17% ಮತ್ತು ಪರಿಶಿಷ್ಟ ಪಂಗಡಗಳಿಗೆ 7% ಮೀಸಲಾತಿ ನೀಡುವ ಮೂಲಕ ಒಟ್ಟು ಪ್ರಮಾಣ 56% ಆಗಿತ್ತು.

ಆದರೆ ಇಂದಿರಾ ಸಹಾನಿ ಪ್ರಕರಣ ತೀರ್ಪಿನ ಪ್ರಕಾರ ಮೀಸಲಾತಿ ಶೇ.50 ಮೀರಬಾರದು ಎಂಬ ನಿಯಮವನ್ನು ನ್ಯಾಯಾಲಯ ಪುನರುಚ್ಚರಿಸಿದ ಹಿನ್ನೆಲೆಯಲ್ಲಿ, ಸರ್ಕಾರವು ತನ್ನ ನಿರ್ಧಾರವನ್ನು ಮರುಪರಿಶೀಲಿಸಬೇಕಾಯಿತು. ಈ ಸಂದರ್ಭದಲ್ಲಿ ಉಂಟಾದ ಗೊಂದಲ ನಿವಾರಣೆಗೆ ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ತಾಂತ್ರಿಕ ಸಮಿತಿ ರಚಿಸಿ, ಅದರ ಶಿಫಾರಸಿನಂತೆ ಕಾನೂನುಬದ್ಧವಾಗಿ ಸಮರ್ಥವಾದ ಹೊಸ ಮಾದರಿಯನ್ನು ರೂಪಿಸಲಾಗಿದೆ.

ಇದೀಗ ಸಚಿವ ಸಂಪುಟ ತೆಗೆದುಕೊಂಡಿರುವ 5.25:5.25:4.5 ಅನುಪಾತದ ನಿರ್ಧಾರವು ನ್ಯಾಯಾಲಯದ ಮಿತಿಗಳನ್ನು ಪಾಲಿಸುವುದರ ಜೊತೆಗೆ, ಎಲ್ಲಾ ಸಮುದಾಯಗಳಿಗೆ ನ್ಯಾಯ ಒದಗಿಸುವ ಸಮತೋಲನದ ಪರಿಹಾರವಾಗಿದೆ ಎಂದು ಸರ್ಕಾರ ಹೇಳಿದೆ. ಈ ನಿರ್ಧಾರವು ಸಾಮಾಜಿಕವಾಗಿ ಹಿಂದುಳಿದ ವರ್ಗಗಳ ಆರ್ಥಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಹೊಸ ದಾರಿಯನ್ನು ತೆರೆದಿಡಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

ಇದರ ಜೊತೆಗೆ, ರಾಜ್ಯ ಸರ್ಕಾರವು ಈಗಾಗಲೇ ಬಜೆಟ್‌ನಲ್ಲಿ ಘೋಷಿಸಿರುವಂತೆ 56,432 ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಶೀಘ್ರದಲ್ಲೇ ಆರಂಭಿಸಲು ಸಜ್ಜಾಗಿದೆ. ನೇಮಕಾತಿಗಳಲ್ಲಿ ಈ ಒಳಮೀಸಲಾತಿ ಮಾದರಿಯನ್ನು ಜಾರಿಗೆ ತರಲಾಗುತ್ತದೆ. ನ್ಯಾಯಾಲಯದ ಅಂತಿಮ ತೀರ್ಪು ಬರುವವರೆಗೆ ಶೇ.50ರ ಮಿತಿಯೊಳಗೆ ನೇಮಕಾತಿ ನಡೆಯಲಿದ್ದು, ಭವಿಷ್ಯದಲ್ಲಿ ಅನುಕೂಲಕರ ತೀರ್ಪು ಬಂದರೆ ಹಿಂದಿನಂತೆ 56% ಮೀಸಲಾತಿ ಜಾರಿಗೆ ತರುವ ಬದ್ಧತೆಯನ್ನು ಸರ್ಕಾರ ಪುನರುಚ್ಚರಿಸಿದೆ.

ಇದಲ್ಲದೆ, 'A' ವರ್ಗದ ನೇಮಕಾತಿಗಳಲ್ಲಿ ಲಭ್ಯವಾಗುವ ಹುದ್ದೆಗಳಲ್ಲಿ ಶೇ.20ರಷ್ಟು ಸ್ಥಾನಗಳನ್ನು 59 ಅಲೆಮಾರಿ ಜಾತಿಗಳಿಗೆ ಮೀಸಲಿಡುವ ಮಹತ್ವದ ನಿರ್ಧಾರವನ್ನೂ ಸಚಿವ ಸಂಪುಟ ಕೈಗೊಂಡಿದೆ. ಪ್ರಸ್ತುತ ಮಾದರಿಯಲ್ಲಿ ಈ ವರ್ಗಕ್ಕೆ 4.5% ಮೀಸಲಾತಿ ಕಲ್ಪಿಸಲಾಗಿದೆ. ಇದರಿಂದ ದೀರ್ಘಕಾಲದಿಂದ ಅಂಚಿನಲ್ಲಿದ್ದ ಸಮುದಾಯಗಳಿಗೆ ಹೆಚ್ಚಿನ ಅವಕಾಶಗಳು ದೊರೆಯಲಿವೆ.

ಈ ತೀರ್ಮಾನವು "ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು" ಎಂಬ ಸರ್ಕಾರದ ಸಾಮಾಜಿಕ ನ್ಯಾಯದ ಧೋರಣೆಯನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ. ದಲಿತ ಸಂಘಟನೆಗಳು, ಸಾಮಾಜಿಕ ಹೋರಾಟಗಾರರು ಹಾಗೂ ವಿವಿಧ ಸಮುದಾಯಗಳು ಈ ನಿರ್ಧಾರವನ್ನು ಸ್ವಾಗತಿಸುವ ವಿಶ್ವಾಸವನ್ನು ಮುಖ್ಯಮಂತ್ರಿ ವ್ಯಕ್ತಪಡಿಸಿದರು.

ಅಂತಿಮವಾಗಿ, ಸರ್ಕಾರವು ಪರಿಶಿಷ್ಟ ಜಾತಿಗಳಿಗೆ 17% ಮತ್ತು ಪರಿಶಿಷ್ಟ ಪಂಗಡಗಳಿಗೆ 7% ಮೀಸಲಾತಿ ನೀಡುವ ತನ್ನ ಮೂಲ ಬದ್ಧತೆಯನ್ನು ಪುನರುಚ್ಚರಿಸಿದ್ದು, ನ್ಯಾಯಾಲಯದಿಂದ ಅನುಕೂಲಕರ ತೀರ್ಪು ಬಂದಲ್ಲಿ ಹಿಂದಿನ 6:6:5 ಮಾದರಿಯನ್ನು ಸಂಪೂರ್ಣವಾಗಿ ಜಾರಿಗೆ ತರುವುದಾಗಿ ಸ್ಪಷ್ಟಪಡಿಸಿದೆ. ಈ ನಿರ್ಧಾರವು ಕರ್ನಾಟಕದ ಸಾಮಾಜಿಕ ನ್ಯಾಯದ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಿ ಉಳಿಯುವ ಸಾಧ್ಯತೆಯಿದೆ.

## ಕೆಂಗೇರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ 24/7 ವಿದ್ಯುತ್ ಪೂರೈಕೆ

ಯಶವಂತಪುರ : ಕ್ಷೇತ್ರದ ಕೆಂಗೇರಿ ಕೋಟೆ ವಾರ್ಡ್‌ನ ಕೆಂಗೇರಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬೆಸ್ಕಾಂ ವತಿಯಿಂದ ದಿನ 24 ಗಂಟೆಯೂ ನಿರಂತರವಾಗಿ ವಿದ್ಯುತ್ ಸರಬರಾಜು ಮಾಡುವ ಮೀಸಲು ಭೂಗತ ತಂತಿ ಅಳವಡಿಸುವ ಕಾಮಗಾರಿಗೆ ಶಾಸಕ ಎಸ್.ಟಿ ಸೋಮಶೇಖರ್ ಭೂಮಿ ಪೂಜೆ ನೆರವೇರಿಸಿದರು

ಈ ವೇಳೆ ಮಾತನಾಡಿದ ಕೆಂಗೇರಿ ವಿಭಾಗ ಪಶ್ಚಿಮ ವಲಯ ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್
ಎನ್. ಶಿವಕುಮಾರ್ ಪ್ರತಿಷ್ಠಿತ ಖಾಸಗಿ ಆಸ್ಪತ್ರೆಗಳಲ್ಲೂ ನಿರಂತರ ವಿದ್ಯುತ್ ಪೂರೈಕೆ ಸೌಲಭ್ಯ ವಿರಳವಾಗಿದ್ದರೂ ಸರ್ಕಾರಿ ಸಮುದಾಯ ಕೇಂದ್ರಕ್ಕೆ ಮೀಸಲು ವಿದ್ಯುತ್ ಸರಬರಾಜು ವ್ಯವಸ್ಥೆ ಅಳವಡಿಸುತ್ತಿರುವುದು ಕೆಂಗೇರಿಯ ಇತಿಹಾಸದಲ್ಲಿ ಅವಿಸ್ಮರಣೀಯ ದಿನವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು

ಹೆರಿಗೆ ಸಮಯದಲ್ಲಿ ವಿದ್ಯುತ್ ವ್ಯತ್ಯಯವಾದರೆ ತಾಯಿ ಮಗುವಿನ ಜೀವ ಹಾನಿ ಸಂಭವಿಸಬಹುದು. 24/7 ವಿದ್ಯುತ್ ಸಂಪರ್ಕ ಸೌಲಭ್ಯ ಕಲ್ಪಿಸುತ್ತಿರುವುದು ಗರ್ಭಿಣಿ, ಬಾಣಂತಿ, ಮಕ್ಕಳು ಸೇರಿ ಸಾವಿರಾರು ರೋಗಿಗಳ ಜೀವ ರಕ್ಷಣೆಗೆ ಸಹಕಾರಿಯಾಗಲಿದೆ ಎಂದರು

ಜನಸೇವೆ ಜನಾರ್ದನ ಸೇವೆ ಎಂದು ಮನಗಂಡಿರುವ ಶಾಸಕ ಎಸ್.ಟಿ ಸೋಮಶೇಖರ್ ಅವರನ್ನು ಜನತೆಯ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು.

ಜಯಪ್ರಕಾಶ್ ನಾರಾಯಣ ವೇದಿಕೆ ಅಧ್ಯಕ್ಷ ಬಿ.ಎಂ ಶಿವಕುಮಾರ್ ಮಾತನಾಡಿ ಕೆಂಗೇರಿ ಸಮುದಾಯ ಆರೋಗ್ಯ ಕೇಂದ್ರವನ್ನು ಕೆಳದರ್ಜೆಗಿಳಿಸಲು ಸರ್ಕಾರ ಸಿದ್ಧತೆ ನಡೆಸಿತ್ತು. ಶಾಸಕ ಎಸ್.ಟಿ ಸೋಮಶೇಖರ್ ಅವರ ಇಚ್ಛಾಶಕ್ತಿ, ಸ್ಥಳೀಯರ ಬೆಂಬಲದಿಂದ ಸಮುದಾಯ ಆರೋಗ್ಯ ಕೇಂದ್ರ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ.

ಪ್ರತಿನಿತ್ಯ ಸಾವಿರಾರು ಬಡವರು ಚಿಕಿತ್ಸೆ ಪಡೆಯುತ್ತಿರುವ ಆಸ್ಪತ್ರೆಗೆ ಕುಡಿಯುವ ನೀರಿನ ಘಟಕ, ಪೀಠೋಪಕರಣ ಸೇರಿ ಅಗತ್ಯ ಸವಲತ್ತು, ಸೌಲಭ್ಯ ಕಲ್ಪಿಸುವ ಮೂಲಕ ಆಸ್ಪತ್ರೆ ಸಬಲೀಕರಣಕ್ಕೆ ಶಾಸಕರು ಸಾಕಷ್ಟು ಶ್ರಮಿಸಿದ್ದಾರೆ. ಸದ್ಯ ಮುಂದುವರೆದು ಸಮುದಾಯ
ಆರೋಗ್ಯ ಕೇಂದ್ರಕ್ಕೆ ಆಡಚಣೆ ಇಲ್ಲದೆ ಹಗಲು ರಾತ್ರಿ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡಲು ಮುಂದಾಗಿರುವುದು ಅತ್ಯಂತ ಶ್ಲಾಘನೀಯ ಕಾರ್ಯ ಎಂದು ಸಂತಸ ವ್ಯಕ್ತಪಡಿಸಿದರು

ಶೀಘ್ರದಲ್ಲೇ ಅಂದಾಜು 22 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಸುಸಜ್ಜಿತ ಮಹಿಳೆಯರ ಮತ್ತು ಮಕ್ಕಳ ಆಸ್ಪತ್ರೆ, ಡಯಾಲಿಸಿಸ್ ಕೇಂದ್ರ ಹಾಗೂ ಕ್ಷೇತ್ರದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೂ ದಿನದ 24 ಗಂಟೆ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಿ ಎಂದು ಶಾಸಕರಿಗೆ ಇದೇ ವೇಳೆ ಮನವಿ ಮಾಡಿದರು

ಯಾವುದೇ ವ್ಯಕ್ತಿಗೆ ಹುದ್ದೆ ಅಧಿಕಾರದಿಂದ ಜನ ಮನ್ನಣೆ ಸಿಗುವುದಿಲ್ಲ. ಜನರ ಸಂಕಷ್ಟಕ್ಕೆ ಸ್ಪಂದಿಸುವ ಸದಾಚಾರದಿಂದ ವ್ಯಕ್ತಿತ್ವಕ್ಕೆ ಮೆರಗು ಲಭಿಸುತ್ತದೆ ಶಾಸಕ ಎಸ್.ಟಿ ಸೋಮಶೇಖರ್ ಇದಕ್ಕೆ ಜ್ವಲಂತ ಉದಾಹರಣೆ, ನಿಜವಾದ ಬಂಗಾರದ ಮನುಷ್ಯ ಎಂದು ಬಣ್ಣಿಸಿದರು.

ಕೆಂಗೇರಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ವೆಂಕಟೇಶ್, ಕೆಂಗೇರಿ ವಿಭಾಗ ಬೆಸ್ಕಾಂ ಎಇ ವಸಂತ್ ಕುಮಾರ ಬಿ, ಕೆಂಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗರಾಜ್ ಎಂ, ಮಹಿಳಾ ಅಧ್ಯಕ್ಷೆ ಲಕ್ಷ್ಮೀ ಪ್ರಭು ರಾಜ್, ಪ್ರಧಾನ ಕಾರ್ಯದರ್ಶಿ ಶ್ರೀನಾಥ್, ಕೆಂಗೇರಿ ಕೋಟೆ ವಾರ್ಡ್ ಕಾಂಗ್ರೆಸ್ ಅಧ್ಯಕ್ಷ ಟಿ. ಪ್ರಭಾಕರ್, ಕೆಂಗಲ್ ಹನುಮಂತಯ್ಯ ವಾರ್ಡ್
ಜಿಬಿಎ ಸಂಭಾವ್ಯ ಅಭ್ಯರ್ಥಿ ಚೇತನ್ ಗೌಡ, ಹೆಮ್ಮಿಗೆಪುರ ವಾರ್ಡ್ ಜಿಬಿಎ ಸಂಭಾವ್ಯ ಅಭ್ಯರ್ಥಿ ಶಿವಮಾದಯ್ಯ ಬಿ.ಆರ್, ಮುಖಂಡರಾದ ಬಿ.ಕೃಷ್ಣಪ್ಪ, ಕೆ.ವೈ.ಕೃಷ್ಣ, ಮುನಿರಾಜು ಮೊದಲಾದವರಿದ್ದರು.

## ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲೆ ಗುಂಡಿನ ದಾಳಿ

**ನವದೆಹಲಿ:** ಅಮೆರಿಕದ ರಾಜಧಾನಿ ವಾಷಿಂಗ್ಟನ್ ಡಿ.ಸಿಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮೇಲೆ ಗುಂಡಿನ ದಾಳಿಗೆ ಯತ್ನ ನಡೆದಿದೆ ಎಂಬ ವರದಿಗಳ ಹಿನ್ನೆಲೆ, ಭಾರತದ ಪ್ರಧಾನಿ ನರೇಂದ್ರ ಮೋದಿ ತೀವ್ರ ಆಕ್ರೋಶ ವ್ಯಕ್ತಪಡಿಸಿ ಘಟನೆಯನ್ನು ಖಂಡಿಸಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹಿಂಸಾಚಾರಕ್ಕೆ ಯಾವುದೇ ರೀತಿಯ ಸ್ಥಾನವಿಲ್ಲ ಎಂಬುದನ್ನು ಪುನರುಚ್ಚರಿಸಿದ ಪ್ರಧಾನಿ, ಇಂತಹ ಘಟನೆಗಳು ಜಾಗತಿಕ ಮಟ್ಟದಲ್ಲಿ ಶಾಂತಿ ಮತ್ತು ಮಾನವೀಯ ಮೌಲ್ಯಗಳಿಗೆ ಧಕ್ಕೆಯನ್ನುಂಟುಮಾಡುತ್ತವೆ ಎಂದು ಹೇಳಿದ್ದಾರೆ.

ಈ ಘಟನೆ ವಾಷಿಂಗ್ಟನ್ ಡಿ.ಸಿಯಲ್ಲಿರುವ ಪ್ರತಿಷ್ಠಿತ ಹೋಟೆಲ್ ಒಂದರಲ್ಲಿ ನಡೆದಿದೆ ಎಂದು ವರದಿಗಳು ತಿಳಿಸಿವೆ. ಘಟನೆಯ ನಂತರ ತಕ್ಷಣವೇ ಭದ್ರತಾ ಸಂಸ್ಥೆಗಳು ಎಚ್ಚರಗೊಂಡು ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದು, ಅಧ್ಯಕ್ಷ ಟ್ರಂಪ್ ಹಾಗೂ ಉಪಾಧ್ಯಕ್ಷರು ಸುರಕ್ಷಿತವಾಗಿರುವುದಾಗಿ ಮೂಲಗಳು ತಿಳಿಸಿವೆ. ಈ ಮಾಹಿತಿಯ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಅವರು ತಮ್ಮ ಪ್ರತಿಕ್ರಿಯೆಯಲ್ಲಿ, ಅಮೆರಿಕದ ನಾಯಕರು ಯಾವುದೇ ಹಾನಿಗೊಳಗಾಗಿಲ್ಲ ಎಂಬ ವಿಚಾರ ತಿಳಿದು ಸಮಾಧಾನವಾಗಿದೆ ಎಂದು ತಿಳಿಸಿದ್ದಾರೆ.

ಪ್ರಧಾನಿ ಮೋದಿ ಅವರು ತಮ್ಮ ಅಧಿಕೃತ ಸಂದೇಶದಲ್ಲಿ, "ಯಾವುದೇ ಪ್ರಜಾಪ್ರಭುತ್ವ ವ್ಯವಸ್ಥೆಯಲ್

# ಮೇ ತಿಂಗಳಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ಆಯೋಜನೆ

**ಬೆಂಗಳೂರು:** ಪ್ಯಾನ್ ಐಐಟಿ ಅಲ್ಯೂಮ್ನಿ ಇಂಡಿಯಾ ಅಸೋಸಿಯೇಷನ್ ಮತ್ತು ಕರ್ನಾಟಕ ಸರ್ಕಾರದ ಸಹಯೋಗದಲ್ಲಿ, ಮೇ 16ರಂದು ಬೆಂಗಳೂರಿನಲ್ಲಿ "ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026" ಆಯೋಜಿಸಲಾಗಿದೆ.

"ತಂತ್ರಜ್ಞಾನದಲ್ಲಿನ ಸ್ವಾಯತ್ತತೆ" ಎಂಬ ವಿಷಯದಡಿ ಈ ಸಮಿಟ್ ನಡೆಯಲಿದೆ ಎಂದು ಕರ್ನಾಟಕ ಸರ್ಕಾರದ ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಪಂಕಜ್ ಕುಮಾರ್ ಪಾಂಡೆ ಅವರು ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ, ವಿಶೇಷವಾಗಿ ಬೆಂಗಳೂರು, ಇಂದು ಭಾರತದ ತಂತ್ರಜ್ಞಾನ ಮಹತ್ವಾಕಾಂಕ್ಷೆಯ ಕೇಂದ್ರಬಿಂದುವಾಗಿ ಹೊರಹೊಮ್ಮಿದೆ. ದೇಶದ ಪ್ರಮುಖ ಜಿಡಿಪಿ ಕೊಡುಗೆ ನೀಡುವ ನಗರಗಳಲ್ಲಿ ಬೆಂಗಳೂರು ಒಂದಾಗಿದ್ದು, ವೆಂಚರ್ ಕ್ಯಾಪಿಟಲ್ ಹೂಡಿಕೆಗಳ ಪ್ರಮುಖ ಕೇಂದ್ರವಾಗಿಯೂ ಗುರುತಿಸಿಕೊಂಡಿದೆ. ಸ್ಟಾರ್ಟ್‌ಅಪ್‌ಗಳ ನಿಧಿ ಸಂಗ್ರಹ ಹಾಗೂ ನವೀನ ಚಟುವಟಿಕೆಗಳಲ್ಲಿ ಮಹತ್ತರ ಪಾತ್ರವಹಿಸಿರುವುದು, ಸಾವಿರಾರು ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ವಿಶ್ವದ ಅತಿ ದೊಡ್ಡ ಪ್ರತಿಭಾ ಸಂಪನ್ಮೂಲಗಳಲ್ಲಿ ಒಂದನ್ನು ಹೊಂದಿರುವುದು-ಈ ಎಲ್ಲ ಕಾರಣಗಳಿಂದ ಬೆಂಗಳೂರು "ಪೂರ್ವದ ಸಿಲಿಕಾನ್ ವ್ಯಾಲಿ" ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಅವರು ಹೇಳಿದರು.

ಸಾರ್ವಜನಿಕ ವಲಯ ಮತ್ತು ಶಾಂತ್ರಿಕ ಕಂಪನಿಗಳ ಮೂಲಕ ಏರೋಸ್ಪೇಸ್, ರಕ್ಷಣಾ ಹಾಗೂ ಮೂಲ ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಕರ್ನಾಟಕವು ಬಲವಾದ ನೆಲೆ ನಿರ್ಮಿಸಿದೆ. ಬಳಿಕ ಇನ್ಫೋಸಿಸ್, ಟಿಸಿಎಸ್, ಎಚ್‌ಸಿಎಲ್ ಮತ್ತು ವಿಪ್ರೋ ಮುಂತಾದ ಐಟಿ ದಿಗ್ಗಜಗಳ ಉದಯದೊಂದಿಗೆ ಭಾರತವನ್ನು ಜಾಗತಿಕ ತಂತ್ರಜ್ಞಾನ ನಕ್ಷೆಯಲ್ಲಿ ಸ್ಥಾಪಿಸುವಲ್ಲಿ ಮಹತ್ವದ ಪಾತ್ರವಹಿಸಿದೆ ಎಂದು ಅವರು ವಿವರಿಸಿದರು.

ಪ್ರಸ್ತುತ ದೇಶವು ಡೀಪ್ ಟೆಕ್, ಕೃತಕ ಬುದ್ಧಿಮತ್ತೆ ಮತ್ತು ವೈಜ್ಞಾನಿಕ ನವೀನತೆಯ ಹಂತಕ್ಕೆ ಸಾಗುತ್ತಿದೆ. ಈ ಹಂತದಲ್ಲಿ ಅಕಾಡೆಮಿಯಾ, ಕೈಗಾರಿಕೆ ಮತ್ತು ಸರ್ಕಾರಗಳ ನಡುವಿನ ಗಟ್ಟಿಯಾದ ಸಹಕಾರ ಅತ್ಯವಶ್ಯಕವಾಗಿದೆ. ತಂತ್ರಜ್ಞಾನ ಸ್ವಾಯತ್ತತೆಯನ್ನು ಸಾಧಿಸಲು ಇದು ಪ್ರಮುಖ ಹಂತವಾಗಿದ್ದು, ಈ ಹಿನ್ನೆಲೆಯಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ರೂಪುಗೊಂಡಿದೆ ಎಂದು ತಿಳಿಸಿದರು.

ಪ್ಯಾನ್ ಐಐಟಿ ಅಧ್ಯಕ್ಷರಾದ ಶ್ರೀ ಪ್ರಭಾತ್ ಕುಮಾರ್ (ಐ.ಆರ್.ಎಸ್) ಅವರು ಮಾತನಾಡಿ, ಸಮಿಟ್‌ನಲ್ಲಿ ಉನ್ನತ ಮಟ್ಟದ ಪ್ಲೀನರಿ ಸೆಷನ್‌ಗಳು, ಆಳವಾದ ಪ್ಯಾನೆಲ್ ಚರ್ಚೆಗಳು ಹಾಗೂ ಎಐ, ರಕ್ಷಣಾ, ಸೆಮಿಕಂಡಕ್ಟರ್, ಇಂಧನ, ಮೊಬೈಲಿಟಿ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸಮಾಂತರ ಚರ್ಚೆಗಳು ನಡೆಯಲಿವೆ ಎಂದು ಹೇಳಿದರು.

ಆಯ್ದ ಪಿಚ್-ಹ್ಯಾಕಥಾನ್ ಮೂಲಕ ಹೆಚ್ಚಿನ ಸಾಧ್ಯತೆ ಹೊಂದಿರುವ ಸ್ಟಾರ್ಟ್‌ಅಪ್‌ಗಳನ್ನು 200ಕ್ಕೂ ಹೆಚ್ಚು ವೆಂಚರ್ ಕ್ಯಾಪಿಟಲಿಸ್ಟ್‌ಗಳೊಂದಿಗೆ ಸಂಪರ್ಕಿಸ ಲಾಗುವುದು. ಜೊತೆಗೆ, 10,000 ಮಂದಿ ಭಾಗವಹಿಸುವ ಹ್ಯಾಕಥಾನ್‌ನಲ್ಲಿ ಕರ್ನಾಟಕ ಸರ್ಕಾರ ನೀಡಿದ ನೈಜ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಹಿಡಿಯ ಲಾಗುವುದು ಎಂದರು.

ಭಾರತವು ಜಾಗತಿಕ ತಂತ್ರಜ್ಞಾನ ಸ್ಪರ್ಧೆಯಲ್ಲಿ ಮುನ್ನಡೆಯಲು ಆಳವಾದ ವಿಜ್ಞಾನ ಮತ್ತು ಮೂಲ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಹೂಡಿಕೆ ಮಾಡುವ ಅಗತ್ಯವಿದೆ. ಪ್ಯಾನ್ ಐಐಟಿ ಸಮುದಾಯವು ಅಪಾರ ಬೌದ್ಧಿಕ ಸಂಪತ್ತು ಮತ್ತು ಜಾಗತಿಕ ಪ್ರಭಾವ ಹೊಂದಿರುವುದರಿಂದ, ಈ ಸಮಿಟ್ ರಾಷ್ಟ್ರೀಯ ಆದ್ಯತೆಗಳನ್ನು ಜಾಗತಿಕ ಆಶಯಗಳೊಂದಿಗೆ ಹೊಂದಿಸಲು ವೇದಿಕೆಯಾಗಲಿದೆ ಎಂದು ಅವರು ಹೇಳಿದರು.

23 ಐಐಟಿಗಳ 5 ಲಕ್ಷಕ್ಕೂ ಹೆಚ್ಚು ಅಲ್ಯೂಮ್ನಿಗಳ ಸಂಯುಕ್ತ ಚಿಂತನೆಯ ಫಲವಾಗಿರುವ ಈ ಸಮಿಟ್, ಜಾಗತಿಕ ಮಟ್ಟದಲ್ಲಿ ತಂತ್ರಜ್ಞಾನ, ವ್ಯವಹಾರ ಮತ್ತು ನೀತಿ ರೂಪಣೆಯಲ್ಲಿ ಸಕ್ರಿಯ ಸಮುದಾಯವನ್ನು ಒಂದೇ ವೇದಿಕೆಗೆ ತರಲಿದೆ. ನವೀನತೆ, ಉದ್ಯಮಶೀಲತೆ ಮತ್ತು ರಾಷ್ಟ್ರ ನಿರ್ಮಾಣದ ಮುಂದಿನ ಹಂತವನ್ನು ಉತ್ತೇಜಿಸುವ ದಿಕ್ಕಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ.

ದಿನಪೂರ್ತಿ ನಡೆಯುವ ಈ ಸಮಿಟ್‌ನಲ್ಲಿ ಮುಖ್ಯ ಭಾಷಣಗಳು, ಪ್ಯಾನೆಲ್ ಚರ್ಚೆಗಳು, ರೌಂಡ್‌ಟೇಬಲ್, ಆಗ್ರಗಣ್ಯ ಸ್ಟಾರ್ಟ್‌ಅಪ್‌ಗಳ ಪ್ರದರ್ಶನ, ಹ್ಯಾಕಥಾನ್ ಹಾಗೂ ಇನೋವೇಶನ್ ಪ್ರದರ್ಶನಗಳು ನಡೆಯಲಿವೆ.

ಈ ಸಮಿಟ್‌ನಲ್ಲಿ ಆರ್ಟ್ ಆಫ್ ಲಿವಿಂಗ್ ಸಂಸ್ಥಾಪಕರಾದ ಗುರುದೇವ ಶ್ರೀ ಶ್ರೀ ರವಿ ಶಂಕರ್, ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಭಾರತ ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರ ಡಾ. ವಿ. ಅನಂತ ನಾಗೇಶ್ವರನ್, ಎಎನ್‌ಆರ್‌ಎಫ್ ಸಿಇಒ ಶಿವಕುಮಾರ್ ಕಲ್ಯಾಣರಾಮನ್, ಇಂಡಿಯಾ ಎಐ ಮಿಷನ್‌ನ ಮಾಜಿ ಸಿಇಒ ಅಭಿಷೇಕ್ ಸಿಂಗ್, ತೇಜಸ್ ವಿಮಾನದ ಮುಖ್ಯ ವಿನ್ಯಾಸಕರಾದ ಡಾ. ಕೋಟಾ ಹರಿನಾರಾಯಣ, ಕರ್ನಾಟಕ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ಇಂಧನ) ಗೌರವ್ ಗುಪ್ತಾ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ನಗರಾಭಿವೃದ್ಧಿ ಮತ್ತು ಗೃಹ) ತುಷಾರ್ ಗಿರಿನಾಥ್, ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ, ಟ್ರಾಲಿ ಸೊಲ್ಯೂಶನ್ಸ್ ಸಂಸ್ಥಾಪಕರಾದ ಭಾರತ್ ಗೋಯಂಕಾ, ಮೈಕ್ರೋಸಾಫ್ಟ್ ರಿಸರ್ಚ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ವೆಂಕಟ್ ಪದ್ಮನಾಭನ್, ಮೀಶೋ ಸಹ ಸಂಸ್ಥಾಪಕ ಹಾಗೂ ಸಿಇಒ ವಿದಿತ್ ಆತ್ರೇಯ್, ಗ್ರೋವ್ ಸಹ ಸಂಸ್ಥಾಪಕ ಹಾಗೂ ಸಿಒಒ ಹರ್ಷ್ ಜೈನ್, ಆಥರ್ ಎನರ್ಜಿ ಸಹ ಸಂಸ್ಥಾಪಕ ಹಾಗೂ ಸಿಇಒ ತರುಣ್ ಮೆಹ್ತಾ, ಸ್ವಿಗ್ಗಿ ಸಹ ಸಂಸ್ಥಾಪಕ ಫಣಿ ಕಿಶನ್ ಅಡ್ಡೆಪಳ್ಳಿ, ಪಿಡಬ್ಲ್ಯೂಸಿ ಗ್ಲೋಬಲ್ ಕ್ಯಾಪೆಬಿಲಿಟಿ ಸೆಂಟರ್ ಮುಖ್ಯಸ್ಥ ರಾಜೇಶ್ ಓಜಾ ಹಾಗೂ ಎಪಿ ಗ್ಲೋಬಲ್ ಡೆಲಿವರಿ ಮುಖ್ಯಸ್ಥ ರಜನೀಶ್ ಪ್ರಸಾದ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ

# ಬೆಳಗವಾಡಿ ಗ್ರಾಮದ ರಾಜಯ್ಯನ ಮಾವಿನ ತೋಟಕ್ಕೆ ಬೆಂಕಿ

**ಮಾಗಡಿ:** ತಾಲ್ಲೂಕಿನ ಬೆಳಗವಾಡಿ ಗ್ರಾಮದ ರೈತ ರಾಜಯ್ಯ ಬಿನ್ ತಿಮ್ಮಯ್ಯ ಅವರಿಗೆ ಸೇರಿರುವ ಸರ್ವೇನಂಬರ್-63 / 1ಕ್ಕೆ ಸೇರಿರುವ ಮಾವಿನ ತೋಟದಲ್ಲಿ ಫಲಭರಿತ ಮಾವಿನ ತೋಟಕ್ಕೆ ದುಷ್ಕರ್ಮಿಗಳು ಬೆಂಕಿ ಹಚ್ಚಿದ್ದಾರೆ. ರೈತನ ಮನೆಯವರೆಲ್ಲರೂ ನೆಂಟರ ಮನೆಯ ಹಬ್ಬಕ್ಕೆ ಬೇರೆ ಊರಿಗೆ ಹೋಗಿದ್ದ ಸಮಯ ನೋಡಿ ಬೆಂಕಿ ಹಚ್ಚಿ ವಿಕೃತಿ ಮೆರೆದಿದ್ದಾರೆ ಎಂದು ನಾಗೇಶ್ ತಿಳಿಸಿದ್ದಾರೆ.

ಬೆಂಕಿಯ ಕೆನ್ನಾಲಿಗೆ ಇಡಿ ತೊಡದಲ್ಲಿದ್ದ 160 ಫಲಭರಿತ ಮಾವಿನ ಮರಗಳು ಮತ್ತು 70 ತೆಂಗಿನಮರಗಳು, 40 ಜೆಟ್ ಪೈಪು, ಕೊಳವೆ ಬಾವಿಗೆ ಅಳವಡಿಸಿದ್ದ ಮೋಟರ್ ಮತ್ತು 150 ಮೀಟರ್ ಕೇಬಲ್ ವೈರ್ ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ. ಮಾಗಡಿ ಅರಕ್ಷಕ ನಿರೀಕ್ಷಕರಿಗೆ ದೂರು ನೀಡಿದ್ದು .ತೋಟಕ್ಕೆ ಬೆಂಕಿ ಹಚ್ಚಿರುವ ದುಷ್ಕರ್ಮಿ ಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಅಂದಾಜು ರೂ.3 ಲಕ್ಷ ನಷ್ಟ ಉಂಟಾಗಿದೆ. ಕಂದಾಯ ಅಧಿಕಾರಿಗಳು ಬೆಂದುಹೋಗಿರುವ ನಮ್ಮ ತೋಟಕ್ಕೆ ಭೇಟಿ ನೀಡಿ ಪರಿಹಾರ ಕೊಡಿಸಿಕೊಡುವಂತೆ ತಹಶೀಲ್ದಾರ್ ಶರತ್‌ಕುಮಾರ್ ಅವರಿಗೆ ಮನವಿ ಸಲ್ಲಿಸಿದ್ದೇವೆ ತಾಲೂಕಿನ ಜನಪ್ರತಿನಿಧಿಗಳು ಸಂಕಷ್ಟದಲ್ಲಿರುವ ನಮ್ಮ ಕುಟುಂಬಕ್ಕೆ ನೆರವಾಗಬೇಕು ಎಂದು ನಾಗೇಶ್ ತಿಳಿಸಿದರು.

# ಜನಿವಾರ ಜಟಾಪಟಿ: ಪೊಲೀಸರು ಮನವಿ ಮಾಡಿದ್ರೂ ದೂರು ನೀಡಲು ಪರೀಕ್ಷಾರ್ಥಿ ಹಿಂದೇಟು

**ಚಿಕ್ಕಬಳ್ಳಾಪುರ:** ಸಿಇಟಿ ಪರೀಕ್ಷೆಯ ವೇಳೆ ಪರೀಕ್ಷಾರ್ಥಿಯ ಜನಿವಾರ ಕತ್ತರಿಸಲ್ಪಟ್ಟಿದೆ ಎಂಬ ಆರೋಪದ ಘಟನೆ ಜಿಲ್ಲೆಯಲ್ಲಿ ಭಾರೀ ಚರ್ಚೆಗೆ ಕಾರಣವಾಗಿದ್ದು, ಪ್ರಕರಣ ಇದೀಗ ಗೊಂದಲದ ಸ್ವರೂಪ ಪಡೆದುಕೊಂಡಿದೆ. ಈ ಘಟನೆಗೆ ಸಂಬಂಧಿಸಿದಂತೆ ಪರೀಕ್ಷಾರ್ಥಿ ಕೆ.ಆರ್. ಸುಪ್ರೀತ್ ಹಾಗೂ ಅವರ ಪೋಷಕರು ಅಧಿಕೃತ ದೂರು ನೀಡಲು ಹಿಂದೇಟು ಹಾಕುತ್ತಿರುವುದು ಪ್ರಕರಣದ ತೀವ್ರತೆಯನ್ನು ಮತ್ತಷ್ಟು ಹೆಚ್ಚಿಸಿದೆ.

ಮೂಲ ಮಾಹಿತಿ ಪ್ರಕಾರ, ನಾಗಾರ್ಜುನ ಪಿ.ಯು ಕಾಲೇಜು ನಲ್ಲಿ ಸಿಇಟಿ ಪರೀಕ್ಷೆ ಬರೆಯಲು ಬಂದಿದ್ದ ಸುಪ್ರೀತ್ ಅವರ ಜನಿವಾರವನ್ನು ಕಾಲೇಜು ಸಿಬ್ಬಂದಿ ಕತ್ತರಿಸಿದ್ದಾರೆ ಎಂಬ ಆರೋಪ ಮೊದಲಿಗೆ ಕೇಳಬಂದಿತ್ತು. ಈ ವಿಷಯ ಸಾಮಾಜಿಕ ವಲಯದಲ್ಲೂ ದೊಡ್ಡ ಮಟ್ಟದ ಪ್ರತಿಕ್ರಿಯೆ ಹುಟ್ಟಿಸಿದ್ದು, ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟಾಗಿದೆ ಎಂಬ ಅಭಿಪ್ರಾಯಗಳು ವ್ಯಕ್ತವಾಗಿದ್ದವು. ಆದರೆ ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ಯಾವುದೇ ಅಧಿಕೃತ ದೂರು ದಾಖಲಾಗದಿರುವುದು ಪ್ರಕರಣದ ಮುಂದಿನ ಕ್ರಮಕ್ಕೆ ಅಡ್ಡಿಯಾಗುತ್ತಿದೆ.

ಈ ಕುರಿತು ಪೊಲೀಸರು ದೂರು ನೀಡುವಂತೆ ಮನವಿ ಮಾಡಿದ್ದರೂ, ಸುಪ್ರೀತ್ ಮತ್ತು ಅವರ ಕುಟುಂಬದಿಂದ ಸ್ಪಷ್ಟ ಪ್ರತಿಕ್ರಿಯೆ ಸಿಗುತ್ತಿಲ್ಲ. ಇದರ ನಡುವೆ, ಕಾಲೇಜಿನ ಆಡಳಿತ ಮಂಡಳಿಯು ಪರೀಕ್ಷಾರ್ಥಿ ಮೇಲೆ ಪ್ರಭಾವ ಬೀರಿರುವ ಸಾಧ್ಯತೆ ಇದೆ ಎಂಬ ಆರೋಪಗಳೂ ಕೇಳಬರುತ್ತಿವೆ. ಪ್ರಕರಣ ನಂದಿಗಿರಿಧಾಮ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗುವ ಸಾಧ್ಯತೆ ಇದ್ದರೂ, ದೂರುದಾರರ ಕೊರತೆಯಿಂದಾಗಿ ಪೊಲೀಸರು ಮುಂದಿನ ಕ್ರಮ ಕೈಗೊಳ್ಳಲು ಕಷ್ಟಪಡುತ್ತಿದ್ದಾರೆ.

ಇದರ ಜೊತೆಗೆ, ಬ್ರಾಹ್ಮಣ ಮಹಾಸಭಾ ನೀಡಿರುವ ಮನವಿಯನ್ನು ದೂರು ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ಪೊಲೀಸ್ ಮೂಲಗಳು ಸ್ಪಷ್ಟಪಡಿಸಿವೆ. ಮನವಿ ಪತ್ರದಲ್ಲಿ ಹಲವರು ಸಹಿ ಮಾಡಿರುವುದರಿಂದ, ಯಾರನ್ನು ಮುಖ್ಯ ದೂರುದಾರರಾಗಿ ಪರಿಗಣಿಸಬೇಕು ಎಂಬ ಪ್ರಶ್ನೆ ಉದ್ಭವಿಸಿದೆ. ವೈಯಕ್ತಿಕ ದೂರು ಬಂದಾಗ ಮಾತ್ರ ಕಾನೂನು ಪ್ರಕಾರ ಪ್ರಕರಣ ದಾಖಲಿಸಲು ಸಾಧ್ಯವಾಗುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇದರ ಮಧ್ಯೆ, ಘಟನೆಗೆ ಸಂಬಂಧಿಸಿದ ಸಿಸಿಟಿವಿ ದೃಶ್ಯಾವಳಿ ಹೊಸ ತಿರುವು ನೀಡಿದೆ. ಆರಂಭದಲ್ಲಿ ಸುಪ್ರೀತ್ "ತನ್ನ ಜನಿವಾರವನ್ನು ಕತ್ತರಿಸಿ ಕಸದ ಬುಟ್ಟಿಗೆ ಎಸೆದಿದ್ದರು, ನಂತರ ಅದನ್ನು ಹುಡುಕಿ ತಂದೆ" ಎಂದು ಹೇಳಿಕೆ ನೀಡಿದ್ದ. ಆದರೆ ಸಿಸಿಟಿವಿ ಪರಿಶೀಲನೆಯಲ್ಲಿ, ಜನಿವಾರವನ್ನು ಕತ್ತರಿಸಿದ ಬಳಿಕ ಅದನ್ನು ಸುಪ್ರೀತ್ ಸ್ವತಃ ಮರಕ್ಕೆ ನೇತು ಹಾಕಿರುವ ದೃಶ್ಯ ಸೆರೆಯಾಗಿರುವುದು ಬೆಳಕಿಗೆ ಬಂದಿದೆ. ಇದರಿಂದ ಪ್ರಕರಣದ ನಿಜಾಸ್ತಿತ್ವದ ಬಗ್ಗೆ ಮತ್ತಷ್ಟು ಅನುಮಾನಗಳು ಮೂಡಿವೆ.

ಈ ಹಿನ್ನೆಲೆಯಲ್ಲಿ ಪೊಲೀಸರು ಸುಪ್ರೀತ್ ಅವರಿಂದ ವಿಡಿಯೋ ಹಾಗೂ ಲಿಖಿತ ಹೇಳಿಕೆಗಳನ್ನು ದಾಖಲಿಸಿಕೊಂಡಿದ್ದಾರೆ. ಭವಿಷ್ಯದಲ್ಲಿ ಯಾವುದೇ ಪ್ರಶ್ನೆಗಳು ಉದ್ಭವಿಸಿದಲ್ಲಿ ಸ್ಪಷ್ಟನೆ ನೀಡಲು ಈ ದಾಖಲೆಗಳನ್ನು ಸಂಗ್ರಹಿಸಲಾಗಿದೆ ಎಂದು ತಿಳಿದುಬಂದಿದೆ. ತನಿಖೆಯ ಭಾಗವಾಗಿ, ಪೊಲೀಸರು ಘಟನೆಯ ಸಂಪೂರ್ಣ ಮರುಸೃಷ್ಟಿಯನ್ನೂ ನಡೆಸಿದ್ದಾರೆ. ಸುಪ್ರೀತ್ ಅವರನ್ನು ಪರೀಕ್ಷಾ ಕೇಂದ್ರಕ್ಕೆ ಕರೆಸಿ, ಅವರು ಹೇಗೆ ಬಂದರು, ಯಾವ ಸಂದರ್ಭಗಳಲ್ಲಿ ಜನಿವಾರ ತೆಗೆದುಹಾಕಲಾಯಿತು, ಯಾರು ಇದ್ದರು, ನಂತರ ಏನಾಯಿತು ಎಂಬ ಎಲ್ಲ ವಿವರಗಳನ್ನು ಹಂತ ಹಂತವಾಗಿ ಪರಿಶೀಲಿಸಲಾಗಿದೆ.

ಈ ವಿಚಾರಕ್ಕೆ ಸಂಬಂಧಿಸಿದಂತೆ ಆರೋಗ್ಯ ಸಚಿವ ಡಾ. ಎಂ.ಸಿ. ಸುಧಾಕರ್ ಪ್ರತಿಕ್ರಿಯೆ ನೀಡಿದ್ದು, ಘಟನೆಯ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ. ಜನಿವಾರದಂತಹ ವಿಷಯವನ್ನು ತೆಗೆಸಲು ಕಾರಣವೇನು ಎಂಬುದರ ಬಗ್ಗೆ ಪ್ರಶ್ನೆ ಎತ್ತಿದ ಅವರು, ಸಮವಸ್ತ್ರ ನಿಯಮಗಳನ್ನು ಜಾರಿಗೆ ತರಲು ಅಧಿಕಾರಿಗಳನ್ನು ನೇಮಿಸಲಾಗಿದ್ದರೂ, ಇಂತಹ ಘಟನೆಗಳು ಸಂಭವಿಸುವುದು ದುಃಖಕರ ಎಂದಿದ್ದಾರೆ. ಕೆಲವರು ಮನಸ್ಥಿತಿಯ ಅಸಮತೋಲನದಿಂದ ಇಂತಹ ನಡೆ ಕೈಗೊಂಡಿರಬಹುದು ಎಂಬ ಅಭಿಪ್ರಾಯ ವ್ಯಕ್ತಪಡಿಸಿದ ಅವರು, ಸಂಪೂರ್ಣ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಸೂಚಿಸಿರುವುದಾಗಿ ತಿಳಿಸಿದ್ದಾರೆ. ಆದರೆ ಪರೀಕ್ಷಾರ್ಥಿ ದೂರು ನೀಡದಿರುವುದು ತನಿಖೆಗೆ ಅಡಚಣೆ ಉಂಟುಮಾಡುತ್ತಿದೆ ಎಂಬುದನ್ನೂ ಅವರು ಒಪ್ಪಿಕೊಂಡಿದ್ದಾರೆ.

ಘಟನೆಯ ಹಿನ್ನೆಲೆಯನ್ನು ಗಮನಿಸಿದರೆ, ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ನಿವಾಸಿಯಾದ ಸುಪ್ರೀತ್, ಇತ್ತೀಚೆಗೆ ಸಿಇಟಿ ಪರೀಕ್ಷೆ ಬರೆಯಲು ನಾಗಾರ್ಜುನ ಪಿ.ಯು ಕಾಲೇಜು ಗೆ ತೆರಳಿದ್ದರು. ಪರೀಕ್ಷಾ ಕೇಂದ್ರದಲ್ಲಿ ನಿಯಮಾನುಸಾರ ತಪಾಸಣೆ ವೇಳೆ ಈ ಘಟನೆ ನಡೆದಿದೆ ಎಂದು ಪ್ರಾಥಮಿಕವಾಗಿ ಹೇಳಲಾಗಿತ್ತು. ಆದರೆ ಸಿಸಿಟಿವಿ ದೃಶ್ಯಾವಳಿ ಹೊರಬಂದ ನಂತರ ಘಟನೆಗೆ ಹೊಸ ಆಯಾಮ ಸಿಕ್ಕಿದ್ದು, ನಿಜಕ್ಕೂ ಏನು ನಡೆದಿದೆ ಎಂಬುದರ ಬಗ್ಗೆ ಇನ್ನಷ್ಟು ಸ್ಪಷ್ಟತೆ ಅಗತ್ಯವಾಗಿದೆ.

ದೂರುದಾರರ ಕೊರತೆ, ಸಿಸಿಟಿವಿ ದೃಶ್ಯಗಳಲ್ಲಿನ ಹೊಸ ಮಾಹಿತಿ ಮತ್ತು ಆರೋಪ-ಪ್ರತ್ಯಾರೋಪಗಳ ನಡುವೆ ಈ ಪ್ರಕರಣ ಇದೀಗ ಸಂಕೀರ್ಣ ಸ್ವರೂಪ ಪಡೆದುಕೊಂಡಿದೆ. ಪೊಲೀಸರು ಎಲ್ಲ ಅಂಶಗಳನ್ನು ಪರಿಶೀಲಿಸುತ್ತಿದ್ದು, ಸತ್ಯಾಂಶವನ್ನು ಹೊರತೆಗೆದ ಬಳಿಕ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

# ಸರ್ಕಾರಿ ಶಾಲೆಗಳಲ್ಲಿ ಕನ್ನಡ ಪತ್ರಿಕೆ ಓದು ಕಡ್ಡಾಯ

**ಬೆಂಗಳೂರು:** ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಗೆ ದಾರಿ ಮಾಡಿಕೊಡುವ ನಿರ್ಧಾರವೊಂದನ್ನು ಕೈಗೊಂಡಿರುವ ಶಿಕ್ಷಣ ಇಲಾಖೆ, ವಿದ್ಯಾರ್ಥಿಗಳ ಭಾಷಾ ಸಾಮರ್ಥ್ಯ, ಸಾಮಾನ್ಯ ಜ್ಞಾನ ಹಾಗೂ ವಿಮರ್ಶಾತ್ಮಕ ಚಿಂತನೆ ಬೆಳೆಸುವ ಉದ್ದೇಶದಿಂದ ಹೊಸ ಆದೇಶವನ್ನು ಹೊರಡಿಸಿದೆ. ಇನ್ನು ಮುಂದೆ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳು ಪ್ರತಿದಿನ ಕನ್ನಡ ದಿನಪತ್ರಿಕೆಗಳನ್ನು ಓದುವುದು ಕಡ್ಡಾಯವಾಗಲಿದೆ. ಈ ಕ್ರಮವು ವಿದ್ಯಾರ್ಥಿಗಳ ಸರ್ವಾಂಗೀಣ ವ್ಯಕ್ತಿತ್ವ ವಿಕಾಸಕ್ಕೆ ಸಹಕಾರಿಯಾಗಲಿದೆ ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

**ಆದೇಶದ ಹಿನ್ನೆಲೆ ಮತ್ತು ಉದ್ದೇಶ:** ಇತ್ತೀಚಿನ ವರ್ಷಗಳಲ್ಲಿ ಡಿಜಿಟಲ್ ಸಾಧನಗಳ ಅತಿಯಾದ ಬಳಕೆ ಮಕ್ಕಳಲ್ಲಿ ಏಕಾಗ್ರತೆ ಕುಂದಿಸುವುದರ ಜೊತೆಗೆ ಓದಿನ ಅಭ್ಯಾಸವನ್ನು ಕಡಿಮೆ ಮಾಡುತ್ತಿದೆ ಎಂಬ ಆತಂಕ ಹೆಚ್ಚಾಗಿತ್ತು. ಮೊಬೈಲ್ ಫೋನ್, ಸಾಮಾಜಿಕ ಜಾಲತಾಣಗಳು, ಶಾರ್ಟ್ ವಿಡಿಯೋಗಳು ಹಾಗೂ ಇಂಟರ್ನೆಟ್ ವ್ಯಸನವು ವಿದ್ಯಾರ್ಥಿಗಳ ಮೇಲೆ ನೇರ ಪರಿಣಾಮ ಬೀರುತ್ತಿದೆ ಎಂ